# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಮುಖ್ಯಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 10/03/2020

### ಸಮಾಚಾರ ಸಣ್ಣದಲ್ಲ

## ಬೋಪಯ್ಯ ನೇತೃತ್ವದಲ್ಲಿ ಸದನ ಸಮಿತಿ

ವಿಶ್ವವಾಣಿ 10/3/2020

ವಿಧಾನಪರಿಷತ್: ರಾಜಧಾನಿ ಬೆಂಗಳೂರು ವ್ಯಾಪ್ತಿಯಲ್ಲಿ ಕೋಟ್ಯಂತರ ರು. ಮೌಲ್ಯದ ಸರಕಾರಿ ಭೂಮಿ ಕಬಳಿಕೆ ಆಗಿದ್ದು, ಈ ಸಂಬಂಧ ಮಾಜಿ ಸ್ಪೀಕರ್ ಕೆ.ಜಿ.ಬೋಪಯ್ಯ ನೇತೃತ್ವದಲ್ಲಿ ಸದನ ಸಮಿತಿ ರಚಿಸಲಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು. ಸೋಮವಾರ ವಿಧಾನ ಪರಿಷತ್‌ನಲ್ಲಿ ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಯಲ್ಲಿ ಮಾತನಾಡಿದರು. ಭೂ ಕಬಳಿಕೆ ತನಿಖಾ ಸಮಿತಿಯಲ್ಲಿ ಶಾಸಕರಾದ ಎ.ಟಿ.ರಾಮಸ್ವಾಮಿ ಸೇರಿದಂತೆ ಪ್ರಮುಖ ಇರಲಿದ್ದಾರೆ. ಅಲ್ಲದೆ, ಸಮಿತಿಗೆ ಅವರನ್ನೇ ಅಧ್ಯಕ್ಷರಾಗಿ ಎಂದು ಹೇಳಲಾಗಿತ್ತು. ಆದರೆ, ಅವರು ಒಪ್ಪದ ಕಾರಣ ಬೋಪಯ್ಯ ಅವರ ಅಧ್ಯಕ್ಷತೆಯಲ್ಲಿ ಈ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಸಮಿತಿ ವರದಿ ನೀಡಿದ ಬಳಿಕ ಭೂ ಕಬಳಿಕೆ ಮಾಡಿಕೊಂಡವರು ಎಷ್ಟೇ ಪ್ರಭಾವಿಗಳಾಗಿದ್ದರೂ ಸಹ ಯಾವುದೇ ಮುಲಾಜಿ ಇಲ್ಲದೇ ಒತ್ತುವರಿ ತೆರವುಗೊಳಿಸಲಾಗುವುದು. ಇದರಿಂದ ಸರಕಾರ ಬೊಕ್ಕಸಕ್ಕೂ 10 ಸಾವಿರ ಕೋಟಿ ರು. ಆದಾಯ ಬರುವ ನಿರೀಕ್ಷೆ ಇದೆ ಎಂದು ಮುಖ್ಯಮಂತ್ರಿಗಳು ವಿಶ್ವಾಸ ವ್ಯಕ್ತಪಡಿಸಿದರು.